ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 15–09–2021

# ಪತ್ರಿಕಾ ಪ್ರಕಟಣೆ

**PRESS RELEASE**

## ವಸತಿ ಶಾಲೆಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಲು 150 ಕೋಟಿ ಪ್ರಸ್ತಾವನೆ: ಕೋಟಾ ಶ್ರೀನಿವಾಸ ಪೂಜಾರಿ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಮುಖ್ಯಮಂತ್ರಿಗಳ ನಿರ್ದೇಶನದಂತೆ ವಸತಿ ಶಾಲೆಗಳ ಮೂಲಭೂತ ಸೌಲಭ್ಯ ಕಲ್ಪಿಸಲು ರೂ.150 ಕೋಟಿ ವೆಚ್ಚದ ಪ್ರಸ್ತಾವನೆ ಸಿದ್ಧಪಡಿಸಲಾಗಿದೆ ಎಂದು ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಕೋಟಾ ಶ್ರೀನಿವಾಸ ಪೂಜಾರಿ ಅವರು ತಿಳಿಸಿದರು.

ಅವರು ಇಂದು ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಕುಣಿಗಲ್ ಕ್ಷೇತ್ರದ ಶಾಸಕ ಡಾ.ಹೆಚ್.ಡಿ.ರಂಗನಾಥ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕುಣಿಗಲ್ ವಿಧಾನಸಬಾ ಕ್ಷೇತ್ರದಲ್ಲಿ ಈಗಾಗಲೇ 4 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಇದರಲ್ಲಿ ಮಲ್ಲನಾಯಕನಹಳ್ಳಿ, ಹುಲಿಯೂರುದುರ್ಗ ವಸತಿ ಶಾಲೆಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ.

ಕೊತ್ತಗೆರೆ ಮತ್ತು ಹುತ್ತರಿದುರ್ಗ ಇಲ್ಲಿನ ವಸತಿ ಶಾಲೆಗಳಿಗೆ ಅನುದಾನದ ಲಭ್ಯತೆ ಆಧಾರದ ಮೇಲೆ ಸ್ವಂತ ಕಟ್ಟಡ ನಿರ್ಮಿಸಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು. ಈಗಾಗಲೇ ಪರಿಶಿಷ್ಟ ಜಾತಿಯ 110 ವಸತಿ ಶಾಲಾ–ಕಾಲೇಜು ಕಟ್ಟಡಗಳ ಕಾಮಘಾರಿಯು ಪ್ರಗತಿಯಲ್ಲಿದೆ. ರಾಜ್ಯಾದ್ಯಂತ ಪರಿಶಿಷ್ಟ ಜಾತಿಯ 62 ವಸತಿ ಶಾಲೆಗಳಿಗೆ ನಿವೇಶನ ಲಭ್ಯವಿದ್ದು, ಸ್ವಂತ ಕಟ್ಟಡ ನಿರ್ಮಾಣ ಮಾಡಲು ಬಾಕಿ ಇದ್ದು, ಅನುದಾನ ಲಭ್ಯತೆಗನುಗುಣವಾಗಿ ಹಂತ–ಹಂತವಾಗಿ ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು. ರಾಜ್ಯದ ವಸತಿ ಶಾಲೆಗಳಲ್ಲಿ ಈಗಾಗಲೇ ಗುಣಮಟ್ಟದ ಶಿಕ್ಷನ ನೀಡಲು ಸರ್ಕಾರ ಹೆಚ್ಚಿನ ಒತ್ತು ನೀಡಿದೆ ಎಂದು ಸಚಿವರು ಸದನಕ್ಕೆ ಮಾಹಿತಿ ನೀಡಿದರು.

## ಜಲಧಾರೆ ಯೋಜನೆ ಕಾಮಗಾರಿಗಳನ್ನು ಜಲಜೀವನ್ ಮಿಷನ್ ಯೋಜನೆಯಡಿ ಅಳವಡಿಸಲಾಗಿದೆ: ಕೆ.ಎಸ್.ಈಶ್ವರಪ್ಪ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ವಿಜಯಪುರ ಜಿಲ್ಲೆಯಲ್ಲಿ “ಜಲಧಾರೆ” ಯೋಜನೆಯಡಿ ಕೈಗೊಳ್ಳಲು ಉದ್ದೇಶಿಸಲಾಗಿದ್ದ ಕಾಮಗಾರಿಗಳನ್ನು “ಜಲಜೀವನ್ ಮಿಷನ್” ಯೋಜನೆಯಡಿ ಅಳವಡಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ತಿಳಿಸಿದರು.

ಅವರು ಇಂದು ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ವಿಧಾನಸಬೆಯ ಸದಸ್ಯರಾದ ಶಿವಾನಂದ ಎಸ್.ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಈ ಯೋಜನೆಯಡಿ ವಿಜಯಪುರ ಜಿಲ್ಲೆಗೆ ಎರಡು ಸಮಗ್ರ ಬಹುಗ್ರಾಮ ಯೋಜನೆಗಳನ್ನು ರೂಪಿಸಲಾಗಿದೆ. ಈಗಾಗಲೇ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, 30 ತಿಂಗಳೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಯೋಜಿಸಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು.

## ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕೆ ಗಮನ ಹರಿಸಲಾಗುವುದು : ಕೆ.ಎಸ್.ಈಶ್ವರಪ್ಪ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಆನೇಕಲ್ ತಾಲ್ಲೂಕಿನ 65 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, ಶಾಶ್ವತ ಪರಿಹಾರಕ್ಕೆ ಗಮನ ಹರಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್.ಈಶ್ವರಪ್ಪ ತಿಳಿಸಿದರು.

ಅವರು ಇಂದು ವಿಧಾನಸಭೆಯ ಅಧಿವೇಶನದ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಬಿ.ಶಿವಣ್ಣ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಎಷ್ಟು ಕೊರೆದರೂ ಕೊಳವೆ ಬಾವಿಯಲ್ಲಿ ನೀರು ಸಿಗದ ಕಾರಣ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳಿಗೆ ತಾತ್ಕಾಲಿಕವಾಗಿ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು.

## ಶೀಘ್ರದಲ್ಲಿ ಸಾರಿಗೆ ಡಿಪೋ ನಿರ್ಮಾಣ : ಬಿ.ಶ್ರೀರಾಮುಲು

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಕೋವಿಡ್–19 ಸಾಂಕ್ರಾಮಿಕ ರೋಗದಿಂದಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಆರ್ಥಿಕ ಪರಿಸ್ಥಿತಿ ಉತ್ತಮವಿಲ್ಲದ ಕಾರಣ, ಬೇರೆ ಹಣ ಉಪಯೋಗಿಸಿ, ಸೊರಬ ತಾಲ್ಲೂಕಿನಲ್ಲಿ ಸಾರಿಗೆ ಡಿಪೋ ನಿರ್ಮಾಣ ಕಾರ್ಯವನ್ನು ಶೀಘ್ರದಲ್ಲಿ ಕೈಗೊಳ್ಳಲಾಗುವುದು ಎಂದು ಸಾರಿಗೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವ ಬಿ. ಶ್ರೀರಾಮುಲು ತಿಳಿಸಿದರು.

ಅವರು ಇಂದು ನಡೆದ ವಿಧಾನಸಭೆ ಅಧಿವೇಶನದಲ್ಲಿ ವಿಧಾನಸಭೆ ಸದಸ್ಯ ಕುಮಾರ ಬಂಗಾರಪ್ಪ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಸೊರಬ ತಾಲ್ಲೂಕಿನಲ್ಲಿ 307 ಗ್ರಾಮಗಳಿದ್ದು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ 146 ಗ್ರಾಮಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. ಪ್ರಸ್ತುತ ಸೊರಬ ಪಟ್ಟಣದಿಂದ 83 ಸುತ್ತುವಳಿಗಳಲ್ಲಿ ಕಾರ್ಯಾಚರಿಸಲಾಗುತ್ತಿದೆ ಹಾಗೂ 2 ಅನುಸೂಚಿಗಳು ಸೊರಬದಲ್ಲಿ ತಂಗುತ್ತಿವೆ. ಸೊರಬ ಮತ್ತು ಸುತ್ತಮುತ್ತಲಿನ ಸ್ಥಳಗಳಿಗೆ ಖಾಸಗಿ ಬಸ್ ಪ್ರವರ್ತಕರು ಹೆಚ್ಚಿನ ಸಂಖ್ಯೆಯಲ್ಲಿ ಸಾರಿಗೆಗಳನ್ನು ಕಾರ್ಯಾಚರಣೆ ನಡೆಸಲಾಗುತ್ತಿದೆ.

ಸೊರಬ ತಾಲ್ಲೂಕಿನ ಸಾರಿಗೆ ಅವಶ್ಯಕತೆಗಳನ್ನು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸಾಗರ ಬಸ್ ಘಟಕ, ಶಿವಮೊಗ್ಗ ಬಸ್ ಘಟಕ ಹಾಗೂ ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಪೂರೈಸಲಾಗುತ್ತಿದೆ ಎಂದರು.

## ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಒಂದು ಕೋಟಿ ರೂ.ಗಳಿಗೆ ಆಡಳಿತಾತ್ಮ ಅನುಮೋದನೆ : ಬಿ. ಶ್ರೀರಾಮುಲು

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಬೆಳಗಾವಿ ಜಿಲ್ಲೆ ಬೈಲಹೊಂಗಲ ನಗರದಲ್ಲಿರುವ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಕಾಮಗಾರಿಗೆ ಒಂದು ಕೋಟಿ ರೂ.ಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಸಾರಿಗೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವ ಬಿ. ಶ್ರೀರಾಮುಲು ತಿಳಿಸಿದರು.

ಅವರು ಇಂದು ನಡೆದ ವಿಧಾನಸಭೆ ಅಧಿವೇಶನದಲ್ಲಿ ವಿಧಾನಸಭೆ ಸದಸ್ಯ ಕೌಜಲಗಿ ಮಹಾಂತೇಶ್ ಶಿವಾನಂದ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ಈ ಕಾಮಗಾರಿಗೆ ಅಂದಾಜು 2 ಕೋಟಿ ಅನುದಾನದ ಅಗತ್ಯವಿದ್ದು, ಉಳಿದ 1 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗುವುದು ಎಂದರು.

## ಪ್ರಕೃತಿ ವಿಕೋಪದಿಂದ ಹಾನಿಗೊಳಗಾದ ರಸ್ತೆಗಳ ದುರಸ್ತಿಗೆ ಕ್ರಮ: ಕೆ.ಎಸ್. ಈಶ್ವರಪ್ಪ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಪುತ್ತೂರು ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಪ್ರಕೃತಿ ವಿಕೋಪದಿಮದ ಹಾನಿಗೊಳಗಾದ ರಸ್ತೆಗಳನ್ನು ಮರು ದುರಸ್ತಿ ಮಾಡಲು ಕ್ರಮಕೈಗೊಳ್ಳಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್. ಈಶ್ವರಪ್ಪ ತಿಳಿಸಿದರು.

ಇಂದು ನಡೆದ ವಿಧಾನಸಭೆ ಅಧಿವೇಶನದಲ್ಲಿ ವಿಧಾನಸಭೆ ಸದಸ್ಯ ಸಂಜೀವ ಮಠಂದೂರ್ ಅವರ ಪ್ರಶ್ನೆಗೆ ಉತ್ತರ ನೀಡಿದ ಸಚಿವರು, ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕು ಪಂಚಾಯತ್‌ನಲ್ಲಿ ಒಟ್ಟು 26 ಹುದ್ದೆಗಳು ಮಂಜೂರಾಗಿದ್ದು, ಇದರಲ್ಲಿ 5 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. ಖಾಲಿಯಿರುವ 21 ಹುದ್ದೆಗಳನ್ನು ನಿಯೋಜನೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಲಾಗಿದೆ.

ಖಾಲಿಯಿರುವ ಹುದ್ದೆಗಳನ್ನು ಆರ್ಥಿಕ ಇಲಾಖೆಯಿಂದ ಅನುಮತಿ ಪಡೆದು ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಸದನಕ್ಕೆ ತಿಳಿಸಿದರು.

## ವಿಧಾನಸಭೆಗೆ ವರದಿ ಮಂಡನೆ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಇಂದು ನಡೆದ ವಿಧಾನ ಸಭೆ ಅಧಿವೇಶನದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಮೇಲೆ ನೀಡಿರುವ ಲೆಕ್ಕಪರಿಶೋಧನ ವರದಿ (2021 ನೇ ವರ್ಷದ ವರದಿ ಸಂಖ್ಯೆ :1) ಹಾಗೂ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಬೆಂಗಳೂರು ನಗರ ಪ್ರದೇಶದಲ್ಲಿ ಮಳೆನೀರು ನಿರ್ವಹಣೆಯ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನ ವರದಿ (2021 ನೇ ವರ್ಷದ ವರದಿ ಸಂಖ್ಯೆ :2) ಯನ್ನು ಸಭೆಗೆ ಮಂಡಿಸಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಶ್ರೀಮತಿ ಕೆ. ಪೂರ್ಣಿಮ ಅವರು ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ 2020-21 ನೇ ಸಾಲಿನ 37ನೇ ವರದಿಯನ್ನು ವಿಧಾನಸಭೆಗೆ ಮಂಡಿಸಿದರು.

## ವಸತಿಯೋಜನೆ ಅನುಷ್ಠಾನಕ್ಕೆ ವಿಜಿಲ್ ಆಪ್: ಸಚಿವ ವಿ.ಸೋಮಣ್ಣ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ರಾಜ್ಯದ ವಿವಿಧ ವಸತಿ ಯೋಜನೆಯಡಿ ಕಳೆದ 2 ವರ್ಷಗಳಲ್ಲಿ ವಸತಿ ರಹಿತರಿಗೆ ಮನೆ ಕಲ್ಪಿಸುವ ಕಾರ್ಯಕ್ರಮ ಮಂದಗತಿಯಲ್ಲಿ ಸಾಗುತ್ತಿರುವ ಕುರಿತು ವಿಧಾನಪರಿಷತ್ ನಲ್ಲಿ ಹೆಚ್.ಎಂ.ರಮೇಶ್‌ಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ರಾಜ್ಯದಲ್ಲಿ ಕೇಂದ್ರ ಹಾಗೂ ರಾಜ್ಯ ಪುರಸ್ಕೃತ ಹಲವು ವಸತಿ ಯೋಜನೆಗಳಿವೆ. 2019-20 ಹಾಗೂ 2020-21 ನೇ ಸಾಲಿನಲ್ಲಿ 2.53 ಲಕ್ಷ ಮನೆಗಳನ್ನು ಪೂರ್ಣಗೊಳಿಸಲಾಗಿದ್ದು, ಅದಕ್ಕೆ ಈವರೆಗೆ 4433.09 ಕೋಟಿ ರೂ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.

ವಿವಿಧ ವಸತಿ ಯೋಜನೆಗಳಡಿ ಪ್ರಗತಿಯಲ್ಲಿರುವ ಮನೆಗಳ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡುವಾಗ ಅನುಸರಿಸುತ್ತಿದ್ದ ಇಂದಿರಾ ಆಪ್ ಮತ್ತು ವಿಜಿಲ್ ಆಪ್ ಅನ್ನು ಒಟ್ಟುಗೂಡಿಸಿ ಇಂದಿರಾ ವಿಜಿಲ್ ಆಪ್ ಎಂಬ ನೂತನ ತಂತ್ರಾಂಶವನ್ನು ಅಳವಡಿಸಲಾಗಿದ್ದು, ಶೀಘ್ರವೇ ಬಿಡುಗಡೆ ಮಾಡಲಾಗುವುದು ಎಂದರು.

## ಕ್ರಮವಿಲ್ಲದ ಕಂದಾಯ ನಿವೇಶನ ನೋಂದಣಿ ಸ್ಥಗಿತ: ಸಚಿವ ಆರ್. ಅಶೋಕ್

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ವಿಧಾನ ಪರಿಷತ್ ಸದಸ್ಯರಾದ ಕಾಂತರಾಜ್ ಅವರು ಕಂದಾಯ ಇಲಾಖೆ ವ್ಯಾಪ್ತಿಗೆ ಬರುವ ನಿವೇಶನದ ಕಾನೂನು ಮಹತ್ವದ ಬಗ್ಗೆ ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಕಂದಾಯ ಸಚಿವರಾದ ಆರ್.ಅಶೋಕ್ ಅವರು ಕಂದಾಯ ನಿವೇಶನವು ಕೃಷಿ ಭೂಮಿ, ಮೈದಾನ ಅಥವಾ ಇನ್ನಿತರ ಖಾಲಿ ಜಾಗಗಳ ಪರಿವರ್ತನ ನಿವೇಶನಗಳಾಗಿವೆ. 2009ರ ತಿದ್ದುಪಡಿಯಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸ್ವತ್ತುಗಳಿಗಾಗಿ ಇರುವ ಇ-ಸ್ವತ್ತು ತಂತ್ರಾಂಶದಿಂದ ಮಾಹಿತಿ ಪಡೆದು ಉಪ ನೋಂದಣಾಧಿಕಾರಿಗಳು ನೋಂದಾಯಿಸಿರುತ್ತಾರೆ. ಕ್ರಮಬದ್ಧವಿಲ್ಲದ ಕಂದಾಯ ನಿವೇಶನಗಳ ನೋಂದಣಿಯನ್ನು ತಡೆಹಿಡಿಯಲಾಗಿದ್ದು, ಅನೇಕ ಪ್ರಕರಣಗಳು ನ್ಯಾಯಾಲಯದಲ್ಲಿದೆ ಎಂದರು

## ವಿಧಾನಪರಿಷತ್ ವಿವಿಧ ಸಮಿತಿಗಳ ಸದಸ್ಯರ ನೇಮಕಕ್ಕೆ ಪ್ರಸ್ತಾವನೆ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಕರ್ನಾಟಕ ವಿಧಾನಪರಿಷತ್ತಿನ ಸರ್ಕಾರಿ ಭರವಸೆಗಳ ಸಮಿತಿಗೆ ಒಂಭತ್ತು ಜನ ಸದಸ್ಯರನ್ನು, ಹಕ್ಕು ಬಾಧ್ಯತಾ ಸಮಿತಿಗೆ ಏಳು ಜನರನ್ನು, ವಸತಿ ಐದು ಜನ ಸದಸ್ಯರನ್ನು ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿಗೆ ಐದು ಜನ, ಸಾರ್ವಜನಿಕ ಉದ್ಯಮಗಳ ಸಮಿತಿಗೆ ಐದು ಜನ, ಅಧೀನ ಶಾಸನ ರಚನಾ ಸಮಿತಿಗೆ ಐದು ಜನ, ಸದಸ್ಯರುಗಳ ಖಾಸಗಿ ವಿಧೇಯಕಗಳು ಮತ್ತು ನಿರ್ಣಯಗಳು ಸಮಿತಿಗೆ ಎಂಟು ಜನ, ಅನುಸೂಚಿತ ಜಾತಿ ಮತ್ತು ಪಂಗಡಗಳ ಕಲ್ಯಾಣ ಸಮಿತಿಗೆ ಐದು ಜನ ಸದಸ್ಯರನ್ನು ದಾಮಾಶ ಪ್ರಾತಿನಿಧ್ಯದ ಅನುಸಾರವಾಗಿ ವರ್ಗಾಯಿಸಬಹುದಾದ ಏಕಮತ ಮೂಲಕ ಚುನಾಯಿಸಬೇಕು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ವಿಧಾನಪರಿಷತ್ತಿನ ಇಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಅವರು ಸದನದಲ್ಲಿ ಸೂಚಿಸಿದರು.

ವಿಧಾನಪರಿಷತ್ ಸದಸ್ಯೆ ಶ್ರೀಮತಿ ಭಾರತಿ ಶೆಟ್ಟಿ ಅವರು 2020-21 ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ 37ನೇ ವರದಿಯನ್ನು ಒಪ್ಪಿಸಿದರು.

ವಸತಿ ಸಚಿವ ವಿ.ಸೋಮಣ್ಣ ಅವರು ಚುನಾವಣಾ ಪ್ರಸ್ತಾವನೆಗಳನ್ನು ಸಭೆಗೆ ಒಪ್ಪಿಸಿದರು. 2012-22 ನೇ ಸಾಲಿನ ವಿಧಾನಮಂಡಲದ/ವಿಧಾನ ಪರಿಷತ್ತಿನ ಈ ಕೆಳಕಂಡ ಸ್ಥಾಯಿ ಸಮಿತಿಗಳಿಗೆ ಹಾಗೂ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಸದಸ್ಯರನ್ನು ಚುನಾಯಿಸುವ ಕುರಿತಾಗಿ ಅವರು ಪ್ರಸ್ತಾವನೆ ಸಲ್ಲಿಸಿದರು.

**ಛಾಯಾಚಿತ್ರ ಶೀರ್ಷಿಕೆ:**

Shri Thaawarchand Gehlot, Hon'ble Governor of Karnataka inaugurated the first convocation of Adichunchanagiri University today at Adichunchanagiri University, Mandya. Dr. Nirmalananda Mahaswamiji, Dr. C N Ashwath Narayana, Hon'ble Minister for Science & Technology and Prof. Gautam R Desiraju, IISC were also present.

## ಆದಿಚುಂಚನಗಿರಿ ವಿಶ್ವವಿದ್ಯಾಲಯದ ಪ್ರಥಮ ಘಟಿಕೋತ್ಸವಕ್ಕೆ ಘನತೆವೆತ್ತ ರಾಜ್ಯಪಾಲರಿಂದ ಚಾಲನೆ

ಬೆಂಗಳೂರು, ಸೆಪ್ಟೆಂಬರ್ 15,(ಕರ್ನಾಟಕ ವಾರ್ತೆ): ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಬುಧವಾರ ಆದಿಚುಂಚನಗಿರಿ ವಿಶ್ವವಿದ್ಯಾನಿಲಯದಲ್ಲಿ ಆಯೋಜಿಸಲಾಗಿದ್ದ ಆದಿಚುಂಚನಗಿರಿ ವಿಶ್ವವಿದ್ಯಾನಿಲಯದ ಪ್ರಥಮ ಘಟಿಕೋತ್ಸವಕ್ಕೆ ಚಾಲನೆ ನೀಡಿದರು.

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನಲ್ಲಿರುವ ಆದಿಚುಂಚನಗಿರಿ ವಿಶ್ವ ವಿದ್ಯಾಲಯಕ್ಕೆ ಬುಧವಾರ ಭೇಟಿ ನೀಡಿದ ಘನತೆವೆತ್ತ ರಾಜ್ಯಪಾಲರು,ಶ್ರೀ ಡಾ.ನಿರ್ಮಾಲಾನಂದ ಮಹಾಸ್ವಾಮಿಜಿ ಅವರ ಸಾನಿಧ್ಯದಲ್ಲಿ ಆದಿಚುಂಚನಗಿರಿ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಪ್ರಜ್ಞಾನ ಭವನವನ್ನು ಉದ್ಘಾಟಿಸಿದರು.

ನಂತರ ಆದಿಚುಂಚನಗಿರಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಘಟಿಕೋತ್ಸವಕ್ಕೆ ಘನತೆವೆತ್ತ ರಾಜ್ಯಪಾಲರು ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಐವರು ವಿದ್ಯಾರ್ಥಿಗಳಿಗೆ ಚಿನ್ನದ ಪದಕಗಳನ್ನು ವಿತರಿಸಿ, ವಿವಿಧ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.
ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವರಾದ ಶ್ರೀ ಸಿಎನ್ ಅಶ್ವಥ್ ನಾರಾಯಣ, ಭಾರತೀಯ ವಿಜ್ಞಾನ ಸಂಸ್ಥೆಯ ಪ್ರೊ.ಗೌತಮ್ ಆರ್ ದೇಸಿರಾಜು, ಶ್ರೀ ಪುರುಷೋತ್ತಮಾನಂದ ಸ್ವಾಮಿಜಿ, ಕುಲಪತಿಗಳಾದ ಪ್ರೊ.ಡಾ.ಎಸ್ ಚಂದ್ರಶೇಖರ್ ಶೆಟ್ಟಿ, ವಿವಿಧ ಗಣ್ಯರು ಉಪಸ್ಥಿತರಿದ್ದರು.

## ಗ್ರಾಹಕ ಸಂವಾದ ಸಭೆ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಬೆಸ್ಕಾಂನ ಎಲ್ಲಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3.00 ರಿಂದ 5.30 ರವರೆಗೆ ನಡೆಯುವ ಗ್ರಾಹಕ ಸಂವಾದ ಸಭೆಗಳಲ್ಲಿ ಗ್ರಾಹಕ ಬಾಂಧವರು ಪಾಲ್ಗೊಂಡು ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಬೆಸ್ಕಾಂನ ಅಧಿಕಾರಿಗಳೊಂದಿಗೆ ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ರೈತರು ಬ್ಯಾಂಕ್ ಖಾತೆಗೆ ಬೆಂಬಲ ಬೆಲೆ ಹಣ ಪಾವತಿಗೆ ಶೀಘ್ರ ಕ್ರಮ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ರಾಜ್ಯ ಸರ್ಕಾರವು 2020-21ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲಬೆಲೆ ಯೋಜನೆಯಡಿ ರೈತರಿಮದ ಭತ್ತ, ರಾಗಿ, ಹಾಗೂ ಬಿಳಿಜೋಳವನ್ನು ಕೆ.ಎಫ್.ಸಿ.ಎಸ್.ಸಿ ಮತ್ತು ಕೆ.ಎಸ್.ಸಿ.ಎಂ.ಎಫ್ ಮುಖಾಂತರ ಖರೀದಿಸಲಾಗಿದ್ದು, ರಾಜ್ಯದಲ್ಲಿ ಒಟ್ಟು 2,75,215 ನೋಮದಾಯಿತ ರೈತರಿಂದ ರೂ. 2,188.93 ಕೋಟಿ ಮೌಲ್ಯದ ಭತ್ತ, ರಾಗಿ ಮತ್ತು ಬಿಳಿ ಜೋಳವನ್ನು ಖರೀದಿಸಲಾಗಿದ್ದು, ಪ್ರಸ್ತುತ 2,73,711 ರೈತರಿಗೆ ರೂ.2,176.40 ಕೋಟಿ ಹಣವನ್ನು ಈಗಾಗಲೇ ರೈತರ ಖಾತೆಗೆ ನಗದು ನೇರ ವರ್ಗಾವಣೆ (ಡಿ.ಬಿ.ಟಿ) ಮುಖಾಂತರ ಪಾವತಿಸಲಾಗಿರುತ್ತದೆ.

ಉಳಿದ 1504 ರೈತರಿಗೆ ರೂ.12.53 ಕೋಟಿಗಳು ರೈತರ ಆಧಾರ್ ಮತ್ತು ಫ್ರೂಟ್ಸ್ ಐಡಿನಲ್ಲಿರುವ ಹೆಸರು ಹೊಂದಾಣಿಕೆಯಾಗದಿರುವುದು, ಆಧಾರ್ ಕಾರ್ಡು ಬ್ಯಾಂಕ್ ಖಾತೆಗೆ ಜೋಡಣೆಯಾಗದೇ ಇರುವುದು, ಆಧಾರ್ ಬ್ಯಾಂಕ್

ಎನ್.ಪಿ.ಸಿ.ಐ ಸೀಡಿಂಗ್ ಆಗದೇ ಇರುವುದು, ರೈತರ ಬ್ಯಾಂಕ್ ಖಾತೆ close / frozen ಆಗಿರುವುದು ಮತ್ತು ಇತರೆ ತಾಂತ್ರಿಕ ಕಾರಣಗಳಿಂದ ಹಣ ಪಾವತಿಯಾಗದೇ ತಿರಸ್ಕೃತಗೊಂಡಿರುತ್ತದೆ.

ರೈತರು ಬ್ಯಾಂಕ್ ಖಾತೆಗೆ ಬೆಂಬಲ ಬೆಲೆ ಹಣ ಪಾವತಿಗೆ ಅಡಚಣೆಯಾಗಿರುವ ಲೋಪ–ದೋಷಗಳನ್ನು ಸರಿಪಡಿಸಲು ಜಿಲ್ಲಾ ಹಂತದಲ್ಲಿಯೇ ಸಂಬಂಧಪಟ್ಟ ನಿಗಮದ ಜಿಲ್ಲಾ ವ್ಯವಸ್ಥಾಪಕರು / ಮಂಡಳಿಯ ಶಾಖಾ ವ್ಯವಸ್ತಾಪಕರ ಕಚೇರಿಯನ್ನು ತಮ್ಮ ಆಧಾರ್  ಮತ್ತು ರಾಷ್ಟ್ರೀಕೃತ ಬ್ಯಾಂಕ್ ಖಾತೆಯ ಮಾಹಿತಿಯೊಂದಿಗೆ ಶೀಘ್ರವಾಗಿ ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.

## **ಭಾಷಾಂತರಕಾರರ ಹುದ್ದೆಗೆ ಅರ್ಜಿ ಆಹ್ವಾನ**

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಕರ್ನಾಟಕ ಉಚ್ಚ ನ್ಯಾಯಾಲಯ ಭಾಷಾಂತರಕಾರರ ಹುದ್ದೆಗಳಿಗಾಗಿ ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ನೇರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು, 16ನೇ ಅಕ್ಟೋಬರ್ 2021 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ.

ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿ ಸ್ನಾತಕೋತ್ತರ ಪದವಿಯೊಂದಿಗೆ ಉತ್ತೀರ್ಣರಾಗಿರುವುದರೊಂದಿಗೆ ಪದವಿಯಲ್ಲಿ ಕನ್ನಡವನ್ನು ಒಂದು ಭಾಷೆಯನ್ನಾಗಿ ಅಧ್ಯಯನ ಮಾಡಿರಬೇಕು. ಲಿಖಿತ ಪರೀಕ್ಷೆ ಹಾಗೂ ಮೌಖಿಕ ಸಂದರ್ಶನದ ಮೂಲಕ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು, ಹೆಚ್ಚಿನ ಮಾಹಿತಿ ಹಾಗೂ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು https://karnatakajudiciary.kar.nic.in/recruitment.php ವೆಬ್‌ಸೈಟಿಗೆ ಭೇಟಿ ನೀಡಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಶೀಘ್ರ ಲಿಪಿಗಾರರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಉಡುಪಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಘಟಕದಲ್ಲಿ ಖಾಲಿ ಇರುವ ಶೀಘ್ರ ಲಿಪಿಗಾರರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು 30ನೇ ಸೆಪ್ಟೆಂಬರ್ 2021 ಕೊನೆಯ ದಿನವಾಗಿರುತ್ತದೆ.

ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಹಿರಿಯ ದರ್ಜೆಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿರಬೇಕು. ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟೇರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಮತ್ತು ಬೆರಳಚ್ಚು ವಿಷಯಗಳನ್ನು ಐಚ್ಚಿಕ ವಿಷಯಗಳನ್ನಾಗಿ ಹೊಂದಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

ಹೆಚ್ಚಿನ ಮಾಹಿತಿ ಹಾಗೂ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು https://districts.ecourts.gov.in/udupi-online recruitment ವೆಬ್‌ಸೈಟಿಗೆ ಭೇಟಿ ನೀಡಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಗುಣಮಟ್ಟವಲ್ಲದ ಔಷಧ ಮತ್ತು ಕಾಂತಿವರ್ಧಕ ಔಷಧಗಳ ಮಾರಾಟ: ಶಿಕ್ಷೆ ಘೋಷಣೆ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಔಷಧ ನಿಯಂತ್ರಣ ಇಲಾಖೆಯು ಮೆ. ನಾಗಮಣಿ, ಖಾತಾ ನಂ. 845/2, ದಿವ್ಯ ಶ್ರೀ ಕಾಂಪ್ಲೆಕ್ಸ್, ಸಂತೆಪೇಟೆ, 2ನೇ ಕ್ರಾಸ್, ಮೈಸೂರು ಆರೋಪಿ ಶ್ರೀ ಶಾಂತಿಲಾಲ್ ಭಂಡಾರಿ ಈ ಸಂಸ್ಥೆಯ ಮಾಲೀಕರು ಇವರು ಅಧಿಕೃತ ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940 ರ ಉಲ್ಲಂಘನೆಗಾಗಿ ಮಾನ್ಯ 3ನೇ ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್ ಮತ್ತು ಸಿಜೆಎಮ್ ನ್ಯಾಯಾಲಯ, ಮೈಸೂರು ಇಲ್ಲಿ ಇಲಾಖಾ ಅಧಿಕಾರಿಗಳು ಮೊಕದ್ದಮೆಯನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ಸದರಿ ಆರೋಪಿಗೆ ರೂ. 6000/- ಗಳ ದಂಡವನ್ನು ಹಾಗೂ ನ್ಯಾಯಾಲಯದ ಅವಧಿ ಮುಗಿಯುವವರೆಗೂ ಸಾದಾ ಜೈಲು ಶಿಕ್ಷೆಯನ್ನು ವಿಧಿಸಿ ತೀರ್ಪು (C.C.No:185/2010 ) ನೀಡಿರುತ್ತದೆ.

ಶ್ರೀ. ಬಿ.ಮಂಜುನಾಥ, ನಂ. 225/1ಆ, ಶನಿದೇವ ದೇವಸ್ಥಾನದ ರಸ್ತೆ ಹತ್ತಿರ, ಮಹದೇವಪುರ, ಜೆ.ಪಿ.ನಗರ, ಮೈಸೂರು-570008 - ಆರೋಪಿ-1, ಮೆ. ಎಸ್ಕೈರ್ ಸರ್ಜಿಕಲ್ಸ್ ನಂ.5/2, 3ನೇ ಮಹಡಿ, ರಾಬರ್ಟ್‌ಸನ್ ರಸ್ತೆ, ಫ್ರೇಸನ್ ಟೌನ್, ಬೆಂಗಳೂರು-560005 - ಆರೋಪಿ-2, ಶ್ರೀ ಅರಣ್ ಟ್ರಿಕಾಂಡ್, ವ್ಯವಸ್ಥಾಪಕ ಪಾಲುದಾರ ಮೆ. ಎಸ್ಕೈರ್ ಸರ್ಜಿಕಲ್ಸ್, ಬಿ-5, ಗಗನ್ ಮನೊರ್, ದಿನ್ನೂರು ಮುಖ್ಯ ರಸ್ತೆ, ಆರ್.ಓ.ನಗರ, ಗಣೇಶ ಬ್ಲಾಕ್, ಬೆಂಗಳೂರು-32 - ಆರೋಪಿ-3 ಇವರು ಅಧಿಕೃತ ಔಷಧ ಪರವಾನಗಿ ಹೊಂದದೆ ಸಂಸ್ಥೆಯಲ್ಲಿ ಔಷಧ ದಾಸ್ತಾನು ಮಾಡಿ ಮಾರಾಟ ಮಾಡಿದ್ದು, ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940 ರ ಉಲ್ಲಂಘನೆ ಮಾಡಿದ್ದಕ್ಕಾಗಿ ಮಾನ್ಯ 3ನೇ ಹೆಚ್ಚುವರಿ ಸಿಜೆಎಮ್ ನ್ಯಾಯಾಲಯ, ಮೈಸೂರು ಇಲ್ಲಿ ಇಲಾಖಾ ಅಧಿಕಾರಿಗಳು ಮೊಕದ್ದಮೆಯನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ಆರೋಪಿ-1 ಇವರಿಗೆ ರೂ.81,000/- ಗಳ ದಂಡವನ್ನು ಮತ್ತು ಆರೋಪಿ-3 ಇವರಿಗೆ ರೂ.61,000/- ಗಳ ದಂಡವನ್ನು ಹಾಗೂ ನ್ಯಾಯಾಲಯದ ಅವಧಿ ಮುಗಿಯುವವರೆಗೂ ಸಾದಾ ಜೈಲು ಶಿಕ್ಷೆ ಯನ್ನು ವಿಧಿಸಿ ತೀರ್ಪು (C.C.No:185/2018) ನೀಡಿರುತ್ತದೆ.

ಮೆ: ಹನುಮಾನ್ ಮೆಡಿಕಲ್ಸ್, ನಂ. 258/1, ಮುನಿಯಪ್ಪ ಕಾಂಪ್ಲೆಕ್ಸ್, ಕನಕಪುರ ಮುಖ್ಯ ರಸ್ತೆ, ವಜರಹಳ್ಳಿ, ಬೆಂಗಳೂರು - 62 ಸಂಸ್ಥೆಯ ಮಾಲೀಕರು ಶ್ರೀ ಉಮಾಶಂಕರ್ ಕೆ.ಹೆಚ್-ಆರೋಪಿ-1, ಆರೋಪಿ-2 ಶ್ರೀ ಹಂಸಮುಖ್ ಪ್ರಜಾಪತ್, ಉಸ್ತುವಾರಿ ವ್ಯಕ್ತಿ ಇವರುಗಳು ಶೆಡ್ಯೂಲ್ ಹೆಚ್ ಔಷಧಗಳಾದ phensedyl Cough Linctus and Spasmo Proxyvon Capsules ಗಳು ಅಂಗಡಿಯಲ್ಲಿ ಲಭ್ಯವಿದ್ದು, ಸಂಬಂಧಿಸಿದ ಖರೀದಿ ಬಿಲ್ಲುಗಳು ಲಭ್ಯವಿಲ್ಲದ ಕಾರಣ ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940ರ ಉಲ್ಲಂಘನೆ ಮಾಡಿದ್ದಕ್ಕಾಗಿ ವಿಶೇಷ ಆರ್ಥಿಕ ಅಪರಾಧಗಳ ನ್ಯಾಯಾಲಯ, ಬೆಂಗಳೂರು ಇಲ್ಲಿ ಇಲಾಖಾ ಅಧಿಕಾರಿಗಳು ಮೊಕದ್ದಮೆಯನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ಸದರಿ ಆರೋಪಿ- 1 & 2 ಇವರಿಗೆ ತಲಾ ರೂ.20,000/- (ಒಟ್ಟು ರೂ.60,000/-) ದಂಡವನ್ನು ಹಾಗೂ ನ್ಯಾಯಾಲಯದ ಅವಧಿ ಮುಗಿಯುವವರೆಗೂ ಸಾದಾ ಜೈಲು ಶಿಕ್ಷೆಯನ್ನು ವಿಧಿಸಿ ತೀರ್ಪು (C.C.No:152/2019) ನೀಡಿರುತ್ತದೆ.

ಮೆ: ರಾಧೆ ಫಾರ್ಮಾ ಪ್ರಾಡಕ್ಟ್ಸ್ ಸಿಟಿಎಸ್ ನೋ. 2865 ಎ-1 ತೊ 19 ಹೆಚ್2, ವಾರ್ಡ್ ನಂ.1, 1ನೇ ಮಹಡಿ, ಕಂಟ್ರಾಕ್ಟರ್ ಕಾಂಪ್ಲೆಕ್ಸ್, ಜೆ.ಸಿ.ನಗರ, ಹುಬ್ಬಳ್ಳಿ, ಧಾರವಾಡ ಸಂಸ್ಥೆಯ ಮಾಲೀಕರು ಮತ್ತು ಉಸ್ತುವಾರಿ ವ್ಯಕ್ತಿ ಶ್ರೀ ಗೋವಿಂದ್ ಪಿ ತ್ರಿವೇದಿ ಆರೋಪಿ-1, ಮೆ.ರಾಧೆ ಫಾರ್ಮಾ ಪ್ರಾಡಕ್ಟ್ ಸಂಸ್ಥೆಯ ಮೇಲ್ವಿಚಾರಕರು ಶ್ರೀ ಜಗದೀಶ್ ಪಿ.ತ್ರಿವೇದಿ ಆರೋಪಿ-2, ಮೆ.ದೀಪಕ್ ಇಂಟರ್ ನ್ಯಾಷನಲ್, ಪಾಮಾಸ್ಯುಟಿಕಲ್ ಡಿಸ್ಟ್ರಿಬ್ಯುಟರ್ಸ್, ನಂ.12, ಮೌಂಟ್ ಜಾಯ್ ರಸ್ತೆ, ಹನುಮಂತ ನಗರ, ಬೆಂಗಳೂರು ಸಂಸ್ಥೆಯ ಮಾಲೀಕರು ಮತ್ತು ಉಸ್ತುವಾರಿ ವ್ಯಕ್ತಿಯಾದ ಶ್ರೀ ವಿಕ್ರಮ್ ಕುಮಾರ್ ಬಿ.ಭೋಜನಿ ಇವರುಗಳು ನಕಲಿ (Spurious) ಔಷಧಿಗಳಾದ (1) Norflow 400 Tablets, B.No.G44052 (2) Norflox – TZ Tablets, B.No.T40091, (3) Ciplox-500 Tablets, B.no.G44425, (4) Registrone-5mg Tablets, B.No.RG4H15D ಅನ್ನು ವಿತರಣೆ ಮಾಡಿ ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940ರ ಉಲ್ಲಂಘನೆ ಮಾಡಿದ್ದಕ್ಕಾಗಿ ಮಾನ್ಯ 1ನೇ ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಬ್ಬಳ್ಳಿ ಇಲ್ಲಿ ಇಲಾಖಾ ಅಧಿಕಾರಿಗಳು ಮೊಕದ್ದಮೆಯನ್ನು ದಾಖಲಿಸಿದ್ದು, ಮಾನ್ಯ

ನ್ಯಾಯಾಲಯವು ಸದರಿ ಆರೋಪಿಗೆ ರೂ. 10,000/- ಗಳ ದಂಡವನ್ನು ಹಾಗೂ ಮೂರು ವರ್ಷ ಸಾದಾ ಶಿಕ್ಷೆಯನ್ನು ವಿಧಿಸಿ ತೀರ್ಪು (C.C.No:2075/2008) ನೀಡಿರುತ್ತದೆ.

ಮೆ: ಸುನಂದ ಮೆಡಿಕಲ್ಸ್, ನಂ.2, ಬಸವನಗುಡಿ ರಸ್ತೆ, ಟೆಂಟ್ ಸರ್ಕಲ್, ಕ್ಯಾತಮಾರನಹಳ್ಳಿ, ಮೈಸೂರು ಈ ಸಂಸ್ಥೆಯ ಮಾಲೀಕರು ಮತ್ತು ಅರ್ಹ ವ್ಯಕ್ತಿಯಾದ ಆರೋಪಿ ಶ್ರೀ ಅನಿಲ್‌ಕುಮಾರ್ ಎಸ್ ಇವರು ಶೆಡ್ಯೂಲ್ - ಹೆಚ್ ಔಷಧವಾದ 1) 1*100 ml of Tossex Cough Syrup ( Chlorpheniramine Maleate and Codeine Phosphate Syrup), B.No. TOS8019, D/E: 12/2020, (2) 3 Tablets of Ultracet (Tramadol Hydrochloride and Acetaminophen Tablets), B.No.N876, D/E: 02/2020, and (3) 6 Tablets of Taxim-O-200 (Cefixime Tablets IP), B.No. 8182019, D/E: 12/2019 ವೈದ್ಯರ ಸಲಹಾ ಚೀಟಿ ಇಲ್ಲದೆ ಮಾರಾಟ ಮಾಡಿ ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940 ರ ಉಲ್ಲಂಘನೆ ಮಾಡಿದ್ದಕ್ಕಾಗಿ ಮಾನ್ಯ 3ನೇ ಹೆಚ್ಚುವರಿ ಸಿಜೆಎಮ್ ಮತ್ತು ಜೆಎಂಎಫ್ಸಿ ನ್ಯಾಯಾಲಯ, ಮೈಸೂರು ಇಲ್ಲಿ ಇಲಾಖಾ ಅಧಿಕಾರಿಗಳು ಮೊಕದ್ದಮೆಯನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ಸದರಿ ಆರೋಪಿಗೆ ರೂ. 40,000/- ಗಳ ದಂಡವನ್ನು ಹಾಗೂ ನ್ಯಾಯಾಲಯದ ಅವಧಿ ಮುಗಿಯುವವರೆಗೂ ಸಾದಾ ಜೈಲು ಶಿಕ್ಷೆಯನ್ನು ವಿಧಿಸಿ ತೀರ್ಪು (C.C.No:74/20) ನೀಡಿರುತ್ತದೆ ಎಂದು ಔಷಧ ನಿಯಂತ್ರಕರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಧಾನಸಭೆಯ ಸರ್ಕಾರಿ ಮುಖ್ಯ ಸಚೇತಕರಾಗಿ ನೇಮಕ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಕರ್ನಾಟಕ ವಿಧಾನಸಭೆಯ ಸದಸ್ಯರಾದ ಸತೀಶ್‌ರೆಡ್ಡಿ ಅವರನ್ನು ಕರ್ನಾಟಕ ವಿಧಾನಸಭೆಯ ಸರ್ಕಾರಿ ಮುಖ್ಯ ಸಚೇತಕರಾಗಿ ಸರ್ಕಾರ ನೇಮಿಸಿದ್ದು, ಈ ಬಗ್ಗೆ ಅಧಿಕೃತ ಆದೇಶ ಸೆಪ್ಟೆಂಬರ್ 13, 2021 ರಿಂದ ಜಾರಿಗೆ ಬಂದಿದೆ ಎಂದು ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಯಾದ ಎಂ.ವಿಶಾಲಾಕ್ಷಿ ಅವರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಸಾಶನ ಸಭೆ

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯು ವಿವಿಧ ಜಿಲ್ಲೆಗಳ ಸಹಾಯಕ ನಿರ್ದೇಶಕರುಗಳಿಂದ ಮಾಸಾಶನ ಮಂಜೂರಾತಿಗಾಗಿ ಶಿಫಾರಸ್ಸಾಗಿ ಬಂದಿರುವ ಅರ್ಜಿಗಳನ್ನು ಅಕಾಡೆಮಿ ವತಿಯಿಂದ **ದಿನಾಂಕ: 15.09.2021 ರಂದು ಬೆಳಗ್ಗೆ 10 ಗಂಟೆಗೆ** ಬೆಂಗಳೂರು, ಜೆ.ಸಿ.ರಸ್ತೆ, ಕನ್ನಡ ಭವನ, "ನಯನ ಸಭಾಂಗಣ" ದಲ್ಲಿ **2020-21ನೇ** ಸಾಲಿನ ಮಾಸಾಶನ ಸಂದರ್ಶನವನ್ನು ಅಕಾಡೆಮಿ ಅಧ್ಯಕ್ಷರಾದ ಆನೂರು ಅನಂತಕೃಷ್ಣ ಶರ್ಮ ಅವರ ಅಧ್ಯಕ್ಷತೆಯಲ್ಲಿ ಏರ್ಪಡಿಸಲಾಯಿತು.

ಈ ಸಂದರ್ಭದಲ್ಲಿ ಕೋವಿಡ್ ನಿಯಮಾವಳಿಗಳನ್ನು ಅನುಸರಿಸಲಾಗಿದೆ. ಸಂದರ್ಶನದಲ್ಲಿ ಒಟ್ಟು 65 ಮಂದಿ ಕಲಾವಿದರು ಮಾಸಾಶನ ಸಂದರ್ಶನದಲ್ಲಿ ಭಾಗವಹಿಸಿದ್ದರು ಎಂದು ಪ್ರಕಟಣೆ ತಿಳಿಸಿದೆ.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ**

ಬೆಂಗಳೂರು, ಸೆಪ್ಟೆಂಬರ್ 15, (ಕರ್ನಾಟಕ ವಾರ್ತೆ):

**ದಿನಾಂಕ: 15.9.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 45 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 35 | ಉತ್ತಮ | CO |
| 3 | ಕವಿಕ, ಮೈಸೂರುರಸ್ತೆ | 60 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 46 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 73 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 66 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 42 | ಉತ್ತಮ | $PM_{10}$, CO |
| **(15.9.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 59 | ತೃಪ್ತಿಕರ | $PM_{10}$ |
| 9 | ಪೀಣ್ಯ | 94 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | 63 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |

| ತೀವ್ರ (>401) | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |
|---|---|

**AQI of the CAAQM stations established in Bengaluru City**

**Date : 15.9.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 45 | Good | $PM_{10}$ |
| 2 | Jayanagar 5th Block, Shalini ground | 35 | Good | CO |
| 3 | KAVIKA, Mysore Road | 60 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 46 | Good | $PM_{10}$ |
| 5 | HSR Layout, near Central Silkboard | 73 | Satisfactory | $PM_{10}$ |
| 6 | City Railway Station, Magestic, Bengaluru | 66 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 42 | Good | $PM_{10}$, CO |
| **(15.9.2021 at 11.05 AM)** | | | | |
| 8 | BWSSB, Kadabesanahalli | 59 | Satisfactory | $PM_{10}$ |
| 9 | Peenya | 94 | Satisfactory | $PM_{10}$ |

| | | | | |
|---|---|---|---|---|
| 10 | BTM Layout | 63 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |